# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2023-24ನೇ ಸಾಲಿನಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಖರೀದಿಸಿ ವಿತರಿಸಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಆಡಳಿತಾತ್ಮಕ ಅನುಮತಿ ನೀಡುವ ಕುರಿತು.

**ಓದಲಾಗಿದೆ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಏಕ ಕಡತ ಸಂಖ್ಯೆ: DEDASC/PLAN/PSEC/9/2023-BUDGET SECTION ಮತ್ತು ದಿನಾಂಕ:16.09.2023ರ ಪತ್ರ.

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ ಇವರು ಮಾನ್ಯ ಇಲಾಖಾ ಸಚಿವರ ಟಿಪ್ಪಣಿ ದಿನಾಂಕ:16.09.2023ರಲ್ಲಿ ಇಲಾಖಾ ವತಿಯಿಂದ ಸುಮಾರು 500 ಅಂಗವಿಕಲ ಫಲಾನುಭವಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಒದಗಿಸಲು ಅಗತ್ಯವಿರುವ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಿದ್ಧಪಡಿಸಿ ಸಲ್ಲಿಸಲು ಸೂಚಿಸಲಾಗಿರುತ್ತದೆ.

ಅಂಗವಿಕಲರಿಗೆ ಸಾಧನ ಸಲಕರಣೆಗಳಡಿ ರೂ.1000.00 ಲಕ್ಷಗಳ ಆಯವ್ಯಯವನ್ನು ನಿಗದಿಪಡಿಸಲು ಆಡಳಿತಾತ್ಮಕ ಅನುಮೋದನೆಯನ್ನು ಕೋರಲಾಗಿದ್ದು, ಅದರಲ್ಲಿ ರೂ.15,000/-ಗಳ ಮಿತಿಯೊಳಗೆ ವಿಕಲಚೇತನರಿಗೆ ಅವಶ್ಯವಿರುವ ಗಾಲಿಕುರ್ಚಿ, ಸಾದಾ ತ್ರಿಚಕ್ರವಾಹನ, ಕ್ಯಾಲಿಪರ್ಸ್, ಕೃಚಸ್, ಶ್ರವಣಸಾಧನ, ವೈಟ್‌ಕೇನ್, ಬ್ರೈಲ್‌ವಾಚ್ ಇನ್ನಿತರ ಸಾಧನ ಸಲಕರಣೆಗಳನ್ನು ಉಚಿತವಾಗಿ ನೀಡಲಾಗುತ್ತಿದೆ. ಜಿಲ್ಲಾ ಪುನರ್ವಸತಿ ಕೇಂದ್ರಗಳು ಆಲಿಮ್ಕೋರವರ ಸಹಯೋಗದೊಂದಿಗೆ ಹಾಗೂ ಮಾನ್ಯ ಸಂಸದರ / ಶಾಸಕರ ನಿಧಿಯಿಂದ ಶೇಕಡ 5 ರಷ್ಟು ಅನುದಾನದಲ್ಲಿ ಸದರಿ ಸಾಧನ ಸಲಕರಣೆಗಳನ್ನು ಖರೀದಿಸಿ ವಿತರಿಸುವ ಕಾರಣ ಎಲ್ಲಾ ಜಿಲ್ಲೆಗಳಿಂದ ರೂ.500.00 ಲಕ್ಷಗಳ ಆಯವ್ಯಯವನ್ನು ಇಲಾಖೆ ವತಿಯಿಂದ ಭರಿಸಬೇಕಾಗಿದ್ದು, ಉಳಿದ ರೂ.500.00 ಲಕ್ಷಗಳ ಆಯವ್ಯಯದಲ್ಲಿ ಮಾನ್ಯ ಇಲಾಖಾ ಸಚಿವರ ಸೂಚನೆಯಂತೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಖರೀದಿಸಿ ವಿತರಿಸಬೇಕಾಗಿದ್ದು, ಪ್ರತಿ ವಾಹನಕ್ಕೆ ಅಂದಾಜು ರೂ.1.00 ಲಕ್ಷಗಳಂತೆ ರೂ.500.00 ಲಕ್ಷಗಳ ಆಯವ್ಯಯದಲ್ಲಿ ಅಂದಾಜು 500 ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಖರೀದಿಸಬಹುದಾಗಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ 2023-24ನೇ ಸಾಲಿನಲ್ಲಿ ಅರ್ಹ ವಿಕಲಚೇತನರಿಗೆ ರೂ.5.00 ಕೋಟಿಗಳ ವೆಚ್ಚದಲ್ಲಿ ಅಂದಾಜು 500 ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿತರಿಸಲು ಲೆಕ್ಕ ಶೀರ್ಷಿಕೆ 2235-02-101-0-52, 051 ಸಾಮಾನ್ಯ ವೆಚ್ಚದಡಿ ಲಭ್ಯವಿರುವ ಆಯವ್ಯಯದಲ್ಲಿ ವೆಚ್ಚ ಭರಿಸಿ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರನ್ವಯ ಟೆಂಡರ್ ಪ್ರಕ್ರಿಯೆ ಮೂಲಕ ಅಥವಾ ಜೆಮ್ ಪೋರ್ಟಲ್‌ನ ಮೂಲಕ ಖರೀದಿಸಿ ಸಂಗ್ರಹಣೆ ಮಾಡಿ ವಿತರಿಸಲು ಆಡಳಿತಾತ್ಮಕ ಅನುಮತಿಯನ್ನು ನೀಡುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ:ಮಮಇ 178 ಪಿಹೆಚ್ ಪಿ(ಇ) 2023, ದಿ:07.10.2023

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, 2023-24ನೇ ಸಾಲಿನಲ್ಲಿ ಅರ್ಹ ವಿಕಲಚೇತನ ವ್ಯಕ್ತಿಗಳಿಗೆ ರೂ.500.00 ಲಕ್ಷಗಳ ವೆಚ್ಚದಲ್ಲಿ ಅಂದಾಜು 500 ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಖರೀದಿಸಿ ಸಂಗ್ರಹಣೆ ಮಾಡಿ ವಿತರಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರನ್ವಯ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲು ಹಾಗೂ ಈ ವೆಚ್ಚವನ್ನು ಲೆಕ್ಕಶೀರ್ಷಿಕೆ:2235-02-101-0-52, ಉದ್ದೇಶಿತ ಲೆಕ್ಕ ಶೀರ್ಷಿಕೆ-051ರಡಿ ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

.....2)

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್.ಡಿ. 07 ಟಿ.ಎಫ್.ಪಿ. 2023, ದಿ:31.07.2023ರಲ್ಲಿ ಸರ್ಕಾರದ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಲಾಗಿರುವ ಆರ್ಥಿಕ ಅಧಿಕಾರದನ್ವಯ ಕಾರ್ಯದರ್ಶಿಯವರ ಅನುಮೋದನೆಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G. H. Saroja 07/10/2023
(ಜಿ. ಹೆಚ್. ಸರೋಜಮ್ಮ)
ಸರ್ಕಾರ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ.

07/10/23

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು- 1.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10) ವಿಧಾನಸೌಧ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿ.ವಿ.ಗೋಪುರ, ಪೋಡಿಯಂ ಬ್ಲಾಕ್, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು-01.
7. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿರವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಇ 178 ಪಿಹೆಚ್‌ಪಿ 2023

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:.14.12.2023

**ಇವರಿಂದ**

ಸರ್ಕಾರದ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ,
ಬೆಂಗಳೂರು-560 001.

**ಇವರಿಗೆ**

ನಿರ್ದೇಶಕರು,
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ನಿರ್ದೇಶನಾಲಯ,
ಪೋಡಿಯಂ ಬ್ಲಾಕ್, ವಿ.ವಿ. ಗೋಪುರ,
ಬೆಂಗಳೂರು-560 001.

ಮಾನ್ಯರೆ,

ವಿಷಯ: 2023-24ನೇ ಸಾಲಿನಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಗಳನ್ನು ಖರೀದಿಸಿ ವಿತರಿಸುವ ಬಗ್ಗೆ.

ಉಲ್ಲೇಖ: ವಿಹಿನಿ/ ಆವ್ಯಯೋ/ ಸಿ-2/ 03/ 2023-24/ 1717, ದಿನಾಂಕ:02.11.2023.

----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2023-24ನೇ ಸಾಲಿನಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಗಳನ್ನು ಖರೀದಿಸಿ ಸಂಗ್ರಹಣೆ ಮಾಡಿ ವಿತರಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರನ್ವಯ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶ ಹೊರಡಿಸಿರುವುದರಿಂದ, ಸದರಿ ಆದೇಶಕ್ಕೆ ಸಂಬಂಧಿಸಿದಂತೆ ಮಾರ್ಗಸೂಚಿಯನ್ನು ಇದರೊಂದಿಗೆ ಲಗತ್ತಿಸಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

G. H. Saroja 14/12/2023
(ಜಿ.ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ
14/12/23

## ವಿಕಲಚೇತನ ವ್ಯಕ್ತಿಗಳಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಗಳನ್ನು ಪಡೆಯಲು ಇರಬೇಕಾದ ಅರ್ಹತೆಗಳು ಮತ್ತು ಮಾನದಂಡಗಳು.

1. ವಿಕಲಚೇತನರು ಭಾರತದ ಪ್ರಜೆಯಾಗಿದ್ದು, ಕರ್ನಾಟಕದಲ್ಲಿ ಕನಿಷ್ಟ 10 ವರ್ಷಗಳು ವಾಸವಾಗಿರಬೇಕು,

2. ಈ ಯೋಜನೆ ಸೌಲಭ್ಯ ಪಡೆಯಲು ಕುಟುಂಬ ವಾರ್ಷಿಕ ಆದಾಯ ರೂ.2.00 ಲಕ್ಷಗಳಿಗಿಂತ ಕಡಿಮೆ ಇರಬೇಕು,

3. ವಿಕಲಚೇತನರ ಅಧಿನಿಯಮದಲ್ಲಿ ಸೂಚಿಸಿರುವ ಹಾಗೂ ವೈದ್ಯಕೀಯ ಪ್ರಾಧಿಕಾರದಿಂದ ನೀಡಿರುವ ಗುರುತಿನ ಚೀಟಿಯೊಂದಿಗೆ ದೃಢೀಕೃತ ವೈದ್ಯಕೀಯ ಪ್ರಮಾಣ ಪತ್ರ ಸಲ್ಲಿಸಬೇಕು. ಇತರೆ ಇಲಾಖೆಗಳು ಅಥವಾ ಸಂಘ ಸಂಸ್ಥೆಗಳಿಂದ ಬ್ಯಾಟರಿಚಾಲಿತ ವ್ಹೀಲ್ ಚೇರ್ ಪಡೆದಿದ್ದಲ್ಲಿ ಅಂತಹವರು ಅರ್ಹರಾಗಿರುವುದಿಲ್ಲ.

4. ಈ ಸೌಲಭ್ಯ ಪಡೆಯುವ ದೈಹಿಕ ವಿಕಲಚೇತನರು ಶೇ.75% ಮತ್ತು ಅದಕ್ಕಿಂತ ಹೆಚ್ಚಿನ ದೈಹಿಕ ವಿಕಲಚೇತನರಾಗಿದ್ದು, ಯಂತ್ರಚಾಲಿತ ದ್ವಿಚಕ್ರವಾಹನವನ್ನು ಚಾಲನೆ ಮಾಡಲು ಸಾಮರ್ಥ್ಯ ಹೊಂದಿರದ ಹಾಗೂ ಕನಿಷ್ಟ ಒಂದು ಕೈ, ಒಂದು ಕಣ್ಣು ಸ್ವಾಧೀನದಲ್ಲಿದ್ದು ಹಾಗೂ ಬ್ಯಾಟರಿಚಾಲಿತ ವ್ಹೀಲ್ ಚೇರ್ ಚಲಾಯಿಸಲು ಇತರೇ ಎಲ್ಲಾ ರೀತಿಯಲ್ಲಿ ಸದೃಢವಾಗಿರುವ ವಿಕಲಚೇತನರಾಗಿರಬೇಕು,

5. ಈ ಸೌಲಭ್ಯ ಪಡೆಯುವ ದೈಹಿಕ ವಿಕಲಚೇತನರು ಸರ್ಕಾರದಿಂದ ಯಂತ್ರಚಾಲಿತ ದ್ವಿಚಕ್ರವಾಹನವನ್ನು ಪಡೆದಿರಬಾರದು,

6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ರವರ ಅಧ್ಯಕ್ಷತೆಯಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ವೈದ್ಯಾಧಿಕಾರಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ಅನುಭವ ಹೊಂದಿರುವ ತಾಂತ್ರಿಕ ಕಾಲೇಜಿನ ಪರಿಣಿತರು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಹಾಗೂ ದೈಹಿಕ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಒಂದು ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರ ಸಮಿತಿಯ ಮೂಲಕ ಫಲಾನುಭವಿಗಳನ್ನು ಆಯ್ಕೆ ಮಾಡುವುದು.

7. ಬ್ಯಾಟರಿಚಾಲಿತ ವ್ಹೀಲ್ ಚೇರ್‌ನ್ನು ಅವರ ಜೀವತಾವಧಿಯಲ್ಲಿ ಯಾವುದೇ ಕಾರಣಕ್ಕೂ ಪರಭಾರೆ ಮಾಡಬಾರದು, ಮಾಡಿದ್ದು, ಕಂಡುಬಂದಲ್ಲಿ ಅಂತಹವರ ಮೇಲೆ ಕಾನೂನು ಕ್ರಮ ಜರುಗಿಸಿ ಸರ್ಕಾರಕ್ಕೆ ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

G. H. Saroja 14/12/2023

(ಜಿ.ಹೆಚ್. ಸರೋಜಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

14/12/23